# ಕರ್ನಾಟಕ ವಿಧಾನಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 749
ಸದಸ್ಯರ ಹೆಸರು : ಶ್ರೀ ಶರಣಗೌಡ ಎ. ಪಾಟೀಲ ಬಯ್ಯಾಪುರ
(ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು)
ಉತ್ತರಿಸಬೇಕಾದ ದಿನಾಂಕ : 23-07-2024
ಉತ್ತರಿಸುವ ಸಚಿವರು : ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಯಚೂರು ಜಿಲ್ಲೆಯ ಲಿಂಗಸಗೂರು ತಾಲ್ಲೂಕಿನ ಹಟ್ಟಿ ಚಿನ್ನದ ಗಣಿಯ ಅಧಿಸೂಚಿತ ಪ್ರದೇಶದಲ್ಲಿ (ಎನ್‌ಎಸಿ) ಮಾನ್ಯ ಮುಖ್ಯಮಂತ್ರಿಗಳ ಬಹು ಕನಸಿನ ಯೋಜನೆಯಾದ ಬಡ ಜನರ ಹಸಿವನ್ನು ನೀಗಿಸುವ ಇಂದಿರಾ ಕ್ಯಾಂಟೀನ್ ಮಾಡಲು ಸ್ಥಳಾವಕಾಶ ಮತ್ತು ಮೂಲಭೂತ ಸೌಕರ್ಯಕ್ಕೆ ಹಟ್ಟಿ ಚಿನ್ನದ ಗಣಿ ಕಂಪನಿಯ ಆಡಳಿತ ಮಂಡಳಿಯಿಂದ ಸ್ಥಳಾವಕಾಶ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ. |
| ಆ) | ಹಾಗಿದ್ದಲ್ಲಿ, ಇಂದಿರಾ ಕ್ಯಾಂಟೀನ್ ಪ್ರಾರಂಭ ಮಾಡಲು ಹಟ್ಟಿ ಚಿನ್ನದ ಗಣಿ ಕಂಪನಿಯು ಸ್ಥಳಾವಕಾಶ ನೀಡಲು ಒಪ್ಪಿದೆಯೇ; | ಹಟ್ಟಿ ಚಿನ್ನದ ಗಣಿ ಕಂಪನಿ ವ್ಯಾಪ್ತಿಯ ಸರ್ವೆ ನಂಬರ್ 40 ಮತ್ತು 41 ರ ಜಮೀನಿನಲ್ಲಿ 02 ಎಕರೆ ಜಮೀನನ್ನು ಹೊಸ ಬಸ್ ನಿಲ್ದಾಣ ಸಲುವಾಗಿ ಈಶಾನ್ಯ ಕರ್ನಾಟಕ ಸಾರಿಗೆ ಸಂಸ್ಥೆ, ರಾಯಚೂರು ರವರಿಗೆ ಹಸ್ತಾಂತರ ಮಾಡಲಾಗಿದೆ. |
| ಇ) | ಹಾಗಿದ್ದಲ್ಲಿ, ಸದರಿ ಪ್ರಸ್ತಾವನೆಯು ಯಾವ ಹಂತದಲ್ಲಿದೆ ಎಂಬ ಮಾಹಿತಿಯನ್ನು ಒದಗಿಸುವುದು? | ಸದರಿ ಸಂಸ್ಥೆಯವರು ಹಟ್ಟಿ ಚಿನ್ನದ ಗಣಿ ನೀಡಿದ ಜಮೀನನ್ನು ಪೂರ್ಣ ಪ್ರಮಾಣದಲ್ಲಿ ಉಪಯೋಗಿಸಿಕೊಂಡಿರುವುದಿಲ್ಲ. ಆದ್ದರಿಂದ ವಿಭಾಗೀಯ ನಿಯಂತ್ರಕರು ಕಲ್ಯಾಣ ಕರ್ನಾಟಕ ಸಾರಿಗೆ ನಿಗಮ ರಾಯಚೂರು ವಿಭಾಗ ರವರನ್ನು ಸಂಪರ್ಕಿಸಿ ಸದರಿ ಜಮೀನಿನಲ್ಲಿ ಖಾಲಿ ಇರುವ ಸ್ಥಳದಲ್ಲಿ ಇಂದಿರಾ ಕ್ಯಾಂಟೀನ್ ಕಟ್ಟಡ ನಿರ್ಮಾಣ ಪ್ರಾರಂಭಿಸಲು ನಿಯಾಮಾನುಸಾರ ಜಾಗವನ್ನು ಹಸ್ತಾಂತರಿಸಿಕೊಂಡು ಸರ್ಕಾರದ ಮಾರ್ಗಸೂಚಿಯಂತೆ ಪ್ರಸ್ತಾವನೆಯು ಸ್ವೀಕೃತವಾದಲ್ಲಿ ಪರಿಶೀಲಿಸಿ ಅಗತ್ಯ ಕ್ರಮಕೈಗೊಳ್ಳಲಾಗುವುದು. |

ಸಂಖ್ಯೆ:ನಅಇ 184 ಎಸ್‌ಎಫ್‌ಸಿ 2024

**(ರಹೀಂ ಖಾನ್)**
ಪೌರಾಡಳಿತ ಹಾಗೂ ಹಜ್ ಸಚಿವರು.